ದಿನಾಂಕ **: 18.11.2025** ರಂದು ಪಿಡಬ್ಲ್ಯೂ - 1 ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣ ವಚನ ಮಾಡಿಸಲಾಯಿತು.

<u>ಪಾಟೀ ಸವಾಲುಃ</u> ಶ್ರೀಮತಿ ಎನ್.ಬಿ.ಎಸ್., 2 ನೇ ಎದುರುದಾರರ ಪರ ವಕೀಲರಿಂದಃ

ಅಪಘಾತವು ಬೆಳಗ್ಗೆ 5.30 ರ ಸಮಯದಲ್ಲಿ ಆಗಿರುತ್ತದೆ. ಆ ಸಮಯದಲ್ಲಿ ನಾನು ವಾಕಿಂಗ್ ಮಾಡುತ್ತಿದ್ದೆ. ಆ ಸಮಯದಲ್ಲಿ ಕತ್ತಲೆ ಇತ್ತು ಎಂದರೆ ಸರಿ. ಹಾಗೆ ಕತ್ತಲಿದ್ದ ಕಾರಣ ನಾನು ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದೆ ಎಂದರೆ ಸರಿಯಲ್ಲ. ಮಣ್ಣಿನ ರಸ್ತೆಯಲ್ಲಿ ಹೋಗುತ್ತಿದ್ದೆ. ನಾನು ರಸ್ತೆಯ ಮಧ್ಯದಲ್ಲಿ ನಡೆದುಕೊಂಡು ಹೋಗುತ್ತಿದ್ದು, ಪರಿಹಾರ ಪಡೆಯುವ ಉದ್ದೇಶದಿಂದ ಮಣ್ಣು ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಅಪಘಾತವಾದ ನಂತರ ನನ್ನನ್ನು ನಿಟ್ಟೆ ಗಾಜ್ರಿಯ ಆಸ್ಪತ್ರೆಗೆ ಅಲ್ಲಿದ್ದಂತಹ ಜನರು ನನ್ನನ್ನು ಅವರ ಕಾರಿನಲ್ಲಿ ಕರೆದುಕೊಂಡು ಹೋಗಿರುತ್ತಾರೆ. ನನಗೆ ಅಪಘಾತದಿಂದ ಏನೆಲ್ಲಾ ತೊಂದರೆ ಯಾಗಿದೆ ಎಂದು ನನ್ನನ್ನು ಪರೀಕ್ಷಿಸಿದ ವೈದ್ಯರ ಬಳಿ ತಿಳಿಸಿದ್ದೇನೆ. ಅಪಘಾತವಾದ ನಂತರ ನನಗೆ ನಡೆದಾಡಲು ಅಥವಾ ಕೈ ಉಪಯೋಗಿಸಲು ಯಾವುದೇ ತೊಂದರೆ ಆಗಿರುವುದಿಲ್ಲ. ನಿಟ್ಟೆ ಗಾಜ್ರಿಯಾ

ಆಸ್ಪತ್ರೆಯಿಂದ ಬಿಡುಗಡೆಯಾದ ನಂತರ ನನ್ನನ್ನು ಮಣಿಪಾಲ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆ. ಸದರಿ ಆಸ್ಪತ್ರೆಯಲ್ಲಿ ನಾನು 8 ದಿನಗಳ ಕಾಲ ಒಳರೋಗಿಯಾಗಿ ದಾಖಲಾಗಿದ್ದೆ. ಮಣಿಪಾಲ ಆಸ್ಪತ್ರೆಯಲ್ಲಿ ತೆಗೆದುಕೊಂಡ ಚಿಕಿತ್ಸೆಗೂ ಹಾಗೂ ಅಪಘಾತಕ್ಕೂ ಯಾವುದೇ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ. ಹೆಚ್ಚಿನ ಪರಿಹಾರ ಪಡೆಯುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಆಸ್ಪತ್ರೆಯಲ್ಲಿ ನಾನು ಮುಖ ಮತ್ತು ಹಲ್ಲಿಗೆ ಸಂಬಂಧಿಸಿದಂತಹ ಚಿಕಿತ್ಸೆಗಳನ್ನು ಮಾತ್ರ ಪಡೆದುಕೊಂಡಿದ್ದೇನೆ ಎಂದರೆ ಸರಿ. ಅಪಘಾತಕ್ಕೆ ಸಂಬಂಧಿಸಿದಂತೆ ನಾನು ಯಾವುದೇ ಚಿಕಿತ್ಸೆಯನ್ನು ಪಡೆಯದೇ ಇದ್ದರೂ ಸಹಾ ಪರಿಹಾರ ಪಡೆಯುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ರಸ್ತೆಯ ಮಧ್ಯಭಾಗದಲ್ಲಿ ನಡೆದುಕೊಂಡು ಹೋಗುತ್ತಿದ್ದು ನನ್ನ ತಪ್ಪಿನಿಂದ ಅಪಘಾತವು ಆದ ಕಾರಣ ನಾನು ಯಾವುದೇ ಪರಿಹಾರ ಪಡೆಯಲು ಅರ್ಹನಲ್ಲ ಎಂದರೆ ಸರಿಯಲ್ಲ. ಆಸ್ಪತ್ರೆಗೆ ಹೋಗಿ ಬರಲು ಖರ್ಚು ಮಾಡಿದ್ದೇನೆ ಎಂದು ತಿಳಿಸಿದ್ದು, ಅದರ ಬಗ್ಗೆ ದಾಖಲೆಯನ್ನು ಹಾಜರುಪಡಿಸಬಹುದು.

ನಾನು ಅಪಘಾತಕ್ಕೆ ಪೂರ್ವದಲ್ಲಿ ಗಾರೆ ಕೆಲಸ ಮಾಡುತ್ತಿದ್ದೆ. ಈಗ ಯಾವುದೇ ಕೆಲಸ ಮಾಡುತ್ತಿಲ್ಲ. ನಾನು ಗಾರೆ ಕೆಲಸ ಮಾಡುತ್ತಿದ್ದೆ ಮತ್ತು ನನಗೆ 30 ಸಾವಿರ ಆದಾಯ ಇತ್ತು ಎಂದು ತೋರಿಸಲು ದಾಖಲೆಗಳನ್ನು ಹಾಜರುಪಡಿಸಬಹುದು. ಅಂಗನ್ಯೂನ್ಯತಾ ಪ್ರಮಾಣ ಪತ್ರವನ್ನು ನೀಡಲು ವೈದ್ಯರು

ನನಗೆ ದೇಹದ ಎಲ್ಲಾ ಭಾಗವನ್ನು ಪರೀಕ್ಷಿಸಿರುತ್ತಾರೆ. ಏನೆಲ್ಲಾ ಪರೀಕ್ಷಗಳು ಎಂದು ನನಗೆ ಹೇಳಲು ಆಗುವುದಿಲ್ಲ. ವೈದ್ಯರು ಯಾವುದೇ ಪರೀಕ್ಷೆಯನ್ನು ಮಾಡದ ಕಾರಣ ನನಗೆ ನೆನಪಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ಈಗ ಯಾವುದೇ ಚಿಕಿತ್ಸೆ ಇರುವುದಿಲ್ಲ. ಎಲ್ಲಾ ಚಿಕಿತ್ಸೆಗಳನ್ನು ನೀಡಲಾಗಿದೆ.

ನನಗೆ ಮೂರು ಜನ ಮಕ್ಕಳಿದ್ದು, ಅದರಲ್ಲಿ ಒಬ್ಬ ಗಂಡು ಮಗ ಹಾಗೂ ಇಬ್ಬರು ಹೆಣ್ಣು ಮಕ್ಕಳಿದ್ದಾರೆ. ಅವರೆಲ್ಲರಿಗೂ ಮದುವೆಯಾಗಿರುತ್ತದೆ. ಮಕ್ಕಳಿಗೆ ಸಂಬಂಧಿಸಿದ ಎಲ್ಲಾ ಶುಭ ಕಾರ್ಯಗಳನ್ನು ನಾನು ಮಾಡಿ ಮುಗಿಸಿದ್ದೇನೆ. ನನಗೆ 73 ವರ್ಷ ವಯಸ್ಸಾಗಿರುತ್ತದೆ. ಅಪಘಾತದಿಂದ ನನ್ನ ಮುಖದಲ್ಲಿ ಯಾವುದೇ ಬದಲಾವಣೆಯಾಗಿರುವುದಿಲ್ಲ ಎಂದರೆ ಸರಿಯಲ್ಲ.

ನಾನು ವಾಹನ ಬಾಡಿಗೆಗಾಗಲೀ, ಪೌಷ್ಟಿಕ ಆಹಾರಕ್ಕಾಗಲೀ, ಪರಿಚಾರಕರ ಭತ್ಯೆಗಾಗಲೀ ಹಣ ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ಅಪಘಾತದಿಂದ ನನಗೆ ಯಾವುದೇ ಶಾಶ್ವತ ಅಂಗನ್ಯೂನತೆ ಆಗಿಲ್ಲ ಎಂದರೆ ಸರಿಯಲ್ಲ. ನನಗೆ ಭವಿಷ್ಯದ ಚಿಕಿತ್ಸೆಯ ಅಗತ್ಯ ಇಲ್ಲ ಎಂದರೆ ಸರಿಯಲ್ಲ. ನಾನು ಹೇಳಿದಷ್ಟು ನಾನು ವೈದ್ಯಕೀಯ ಚಿಕಿತ್ಸೆಗೆ ಹಣ ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ನನಗೆ ಯಾವುದೇ ಆದಾಯ ನಷ್ಟ ಆಗಿಲ್ಲ ಎಂದರೆ ಸರಿಯಲ್ಲ. ನಾನು ಈಗಲೂ ಮೊದಲಿನಂತೆ ಕೆಲಸ ಮಾಡಲು ಶಕ್ತನಾಗಿದ್ದೇನೆ ಎಂದರೆ ಸರಿಯಲ್ಲ.

ನನ್ನ ತಪ್ಪಿನಿಂದ ಅಪಘಾತವಾಗಿರುವ ಕಾರಣ 2ನೇ ಎದುರುದಾರರು ನನಗೆ ಪರಿಹಾರ ನೀಡಲು ಬಾಧ್ಯಸ್ಥರಲ್ಲ ಎಂದರೆ ಸರಿಯಲ್ಲ. ಹೆಚ್ಚಿನ ಪರಿಹಾರ ಪಡೆಯುವ ಸಲುವಾಗಿ ದಾಖಲೆಗಳನ್ನು ಸೃಷ್ಟಿಸಿ ಹಾಜರುಪಡಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತಕ್ಕೂ ಹಾಗೂ ನನಗೆ ಆದ ಗಾಯಗಳಿಗೂ ಯಾವುದೇ ಸಂಬಂಧ ಇಲ್ಲದೇ ಇದ್ದರೂ ಸಹಾ ನಾನು ಸುಳ್ಳ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಯಾವುದೇ ಪರಿಹಾರಕ್ಕೆ ಅರ್ಹನಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

(ಸಾಕ್ಷಿಯ ಹೇಳಿಕೆಯಂತೆ ನಾನು ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನ ನೀಡಿದ್ದು, ಅದರಂತೆ ಬೆರಳಚ್ಚು ಮಾಡಲಾಯಿತು).

ಓ ಹೇ ಕೇ ಸರಿ ಇದೆ

Sd/-
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಎಎಂಎಸಿಟಿ.,
ಕಾರ್ಕಳ.